6

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ ಚುನಾವಣೆ - ಉಪಸಭಾಪತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE : 20/1/2021

# ಉಪಸಭಾಪತಿ ಸ್ಥಾನಕ್ಕೆ ಚುನಾವಣೆ

ವಿಶ್ವ 20/1/21

ಬೆಂಗಳೂರು: ವಿಧಾನ ಪರಿಷತ್ ಉಪಸಭಾಪತಿ ಧರ್ಮೇಗೌಡ ನಿಧನದಿಂದ ತೆರವಾಗಿರುವ ಸ್ಥಾನಕ್ಕೆ ಜ.29ರಂದು ಚುನಾವಣೆ ನಡೆಯಲಿದೆ. ಈ ಬಗ್ಗೆ ವಿಧಾನ ಪರಿಷತ್ ಕಾರ್ಯದರ್ಶಿ ಮಹಾಲಕ್ಷ್ಮೀ ಅವರು ಅಧಿಕೃತ ಆದೇಶ ಹೊರಡಿಸಿದ್ದು, 28ರ ಮಧ್ಯಾಹ್ನ 3 ಗಂಟೆಯೊಳಗೆ ನಾಮಪತ್ರ ಸಲ್ಲಿಸುವಂತೆ ಸೂಚನೆ ನೀಡಲಾಗಿದೆ. ಸಭಾಪತಿ ಸ್ಥಾನಕ್ಕೆ ಜೆಡಿಎಸ್ ಬೆಂಬಲ ಅಗತ್ಯವಿರುವುದರಿಂದ ಬಿಜೆಪಿ ಯಾವ ನಡೆ ಅನುಸರಿಸುತ್ತದೆ ಎನ್ನುವುದನ್ನು ಕಾದು ನೋಡಬೇಕಿದೆ. ನಾಮಪತ್ರ ಸಲ್ಲಿಸುವ ಅಭ್ಯರ್ಥಿಗೆ ಪರಿಷತ್ ಸದಸ್ಯರು ಪ್ರಸ್ತಾವನೆ ಸಲ್ಲಿಸಿ ಬಳಿಕ ಅನುಮೋದನೆ ಮಾಡಬೇಕಿದೆ. ಯಾವುದೇ ಸದಸ್ಯ ತನ್ನನ್ನು ತಾನು ಪ್ರಸ್ತಾಪ ಅಥವಾ ಅನುಮೋದನೆ ಮಾಡಿಕೊಳ್ಳುವಂತಿಲ್ಲ ಎಂದು ಸ್ಪಷ್ಟಪಡಿಸಿದೆ.